ಪಿ.ಡಬ್ಲ್ಯು-೧

ದಿ: ೨೯.೦೫.೨೦೨೪ ರಂದು ೧ನೇ ವಾದಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ವಾದಿಗಳ ಪರವಾಗಿ ಶ್ರೀಯುತ ಕೆ.ಆರ್.ಎ ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಎಂ.ಆರ್.ಸಂಖ್ಯೆ ೩೮/೮೮-೮೯ ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ.೧ ಎಂದು, ಹಂದೇನಹಳ್ಳಿ ಗ್ರಾಮದ ಸರ್ವೆ ನಂ.೧೩೩ ಹಿಸ್ಸಾ *, ವಿಸ್ತೀರ್ಣ ೪.೨೩ ಎಕರೆ ಜಮೀನಿನ ೨೦೧೨-೧೩ ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ನಿಪಿ.೨ ಎಂದು, ದಿ: ೨೪.೦೮.೨೦೧೬ ರ ವಿಭಾಗ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ.೩ ಎಂದು, ಹಂದೇನಹಳ್ಳಿ ಗ್ರಾಮದ ಸರ್ವೆ ನಂ.೧೩೩ ಹಿಸ್ಸಾ *, ವಿಸ್ತೀರ್ಣ ೪.೨೩ ಎಕರೆ ಜಮೀನಿನ ೨೦೧೯-೨೦ ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ನಿಪಿ.೪ ಎಂದು, ೨ ಛಾಯಾಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಪ್ರತಿವಾದಿ ಪರ ವಕೀಲರು ತಕರಾರಿನ ಮೇರೆಗೆ ಒಟ್ಟಾಗಿ ನಿಪಿ.೫ ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**